ವಿ-72-(159)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಿ.ಎಂ.ಎಲ್. ಕಾಂತರಾಜು ಇವರು ನಿಯಮ-72ರ ನಿಯಮದ ಮೇರೆಗೆ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ
(ಸೂಚನೆ ಸಂಖ್ಯೆ:159)

## ಪ್ರಶ್ನೆ

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವು ಬೆಂಗಳೂರಿನಲ್ಲಿ ಪ್ರಾರಂಭಗೊಂಡಿದ್ದು, ಮೊದಲು ವಿಶ್ವವಿದ್ಯಾಲಯದ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ವಿಶೇಷಾಧಿಕಾರಿಯನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಸದರಿ ಅಧಿಕಾರಿಯು ಅಗತ್ಯತೆಗನುಗುಣವಾಗಿ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಸಂಚಿತ ವೇತನದ ಆಧಾರದ ಮೇಲೆ ಹಲವಾರು ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದ್ದರು. ಇದರಲ್ಲಿ ಪ್ರನೂಪ್.ಎಸ್. ಇವರು ಕಚೇರಿ ಸಹಾಯಕ (ಗ್ರೂಪ್ ಡಿ) ಹುದ್ದೆಯಡಿ ನೇಮಕಗೊಂಡಿದ್ದು, ಇವರಿಗೆ ಸೆಪ್ಟಂಬರ್ 2019ರ ಅರ್ಧತಿಂಗಳ ವೇತನ ಮಾತ್ರ ನೀಡಿದ್ದು, ಬಾಕಿ 13 ತಿಂಗಳ ವೇತನ ನೀಡಿರುವುದಿಲ್ಲ. ಇದರ ಸಂಬಂಧ ಸದನದಲ್ಲಿ ಸರ್ಕಾರದ ಗಮನ ಸೆಳೆದಾಗ ಇವರನ್ನು ಕೆಲಸದಿಂದ ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಇವರಿಗೆ ಬಾಕಿ ಬರಬೇಕಾಗಿರುವ ವೇತನವನ್ನು ಪಾವತಿ ಮಾಡುವುದಾಗಿ ಸಚಿವರು ಭರವಸೆ ನೀಡಿದ್ದರು. ಆ ಭರವಸೆ ಭರವಸೆಯಾಗಿಯೇ ಉಳಿದಿರುತ್ತದೆ. ಆದ್ದರಿಂದ ಪ್ರನೂಪ್.ಎಸ್. ಮತ್ತು ಇವರ ಜೊತೆಯಲ್ಲಿಯೇ ಸದರಿ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಎಲ್ಲಾ ಸಿಬ್ಬಂದಿಗಳಿಗೂ ಬಾಕಿ ಇರುವ ವೇತನವನ್ನು ಪಾವತಿ ಮಾಡುವ ಬಗ್ಗೆ.

## ಉತ್ತರ

ಪ್ರಥಮ ಕುಲಪತಿಯನ್ನು ನೇಮಿಸುವವರೆಗೆ, ಏಕಾತ್ಮಕ ಸ್ವರೂಪದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸ್ಥಾಪನೆಗೆ ಕ್ರಮಗಳನ್ನು ಕೈಗೊಳ್ಳುವ ಉದ್ದೇಶಕ್ಕಾಗಿ ನೇಮಿಸಲಾಗಿರುವ ವಿಶೇಷಾಧಿಕಾರಿಯು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ 2019 (2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 15)ರ ಪ್ರಕರಣ 17ರಲ್ಲಿ ಉಪಬಂಧಿಸುವ ಮೇರೆಗೆ, ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂತೆ ಅನುಕ್ರಮವಾಗಿ ವಿಶ್ವವಿದ್ಯಾಲಯದ ಮತ್ತು ಕುಲಪತಿಗಳ ಅಂಥ ಅಧಿಕಾರಗಳನ್ನು ಚಲಾಯಿಸಬೇಕಾಗುತ್ತದೆ. ಆದರೆ, ಸರ್ಕಾರವು ಅಂಥ ಅಧಿಕಾರಗಳನ್ನು ನಿರ್ದಿಷ್ಟಪಡಿಸದೇ ಇರದ ಸನ್ನಿವೇಶದಲ್ಲಿ ಸರ್ಕಾರದ ಪೂರ್ವಾನುಮೋದನೆಯನ್ನು ಪಡೆಯದೇ ಹಾಗೂ ಸರ್ಕಾರದ ಗಮನಕ್ಕೆ ತಾರದೇ ಮತ್ತು ವೇತನ ಪಾವತಿಗೆ ಹಣಕಾಸಿನ ಅವಕಾಶ ಕಲ್ಪಿಸಿಕೊಳ್ಳದೇ ಅಂದಿನ ವಿಶೇಷಾಧಿಕಾರಿಗಳು ತಾತ್ಕಾಲಿಕ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿಕೊಂಡಿರುತ್ತಾರೆ.

ಮುಂದುವರೆದು, ಬೋಧಕೇತರ ಸಿಬ್ಬಂದಿಯನ್ನು ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿರುವುದಕ್ಕೆ ಸಂಬಂಧಿಸಿದಂತೆ ಯಾವುದೇ ಆದೇಶಗಳು ಹಾಗೂ ಹೊರಗುತ್ತಿಗೆ ಸಂಬಂಧಿ ದಾಖಲೆಗಳಾಗಲೀ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವುದಿಲ್ಲ.

--2

ಖಾಯಂ ನೇಮಕಾತಿಗೆ ಅನ್ವಯವಾಗುವ ಕ್ರಮಪದ್ಧತಿ, ಮೀಸಲಾತಿ ನೀತಿ ಹಾಗೂ ಅರ್ಹತಾ ಷರತ್ತುಗಳನ್ನು ಅನ್ವಯಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ-55ರನ್ವಯ, 1 ವರ್ಷ ಅವಧಿಗೆ ಮೀರದಂತೆ ಮಾತ್ರ ಬೋಧಕೇತರ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಬೋಧಕೇತರ ಸಿಬ್ಬಂದಿಯ ನೇಮಕಾತಿಗೆ ಸಂಬಂಧಿಸಿದಂತೆ ಯಾವುದೇ ದಾಖಲಾತಿಗಳು ಲಭ್ಯವಿಲ್ಲದ ಕಾರಣ ಬೋಧಕೇತರ ಸಿಬ್ಬಂದಿಯನ್ನು ದಿನಾಂಕ: 09/11/2020ರಂದು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿರುತ್ತದೆ.

ಬೋಧಕೇತರ ಸಿಬ್ಬಂದಿಗೆ ಬಾಕಿ ವೇತನ ಪಾವತಿಯಾಗದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದ್ದು, ವೇತನ ಪಾವತಿಗಾಗಿ ಅನುದಾನ ಒದಗಿಸುವ ಕುರಿತು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಆರ್ಥಿಕ ಇಲಾಖೆ ಅನುದಾನ ಒದಗಿಸಿದ ನಂತರ ನಿಯಮಾನುಸಾರ ಪರಿಶೀಲಿಸಿ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.

ಸಂಖ್ಯೆ: ಇಡಿ 135 ಹೆಚ್‌ಪಿಯು 2021)